ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ



# ಸ್ವಚ್ಛವಾಹಿನಿಯ ಸಾರಥಿಯರು

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ವಿವಿಧ ರಾಜ್ಯಗಳಲ್ಲಿ ಯಶಸ್ವಿ ಅನುಷ್ಠಾನಗೊಂಡು ಸಾಕಷ್ಟು ಬದಲಾವಣೆ ತಂದಿದೆ. ವಿಶೇಷವಾಗಿ ಕರ್ನಾಟಕದಲ್ಲಿ ಸ್ವಚ್ಛ ಭಾರತ್ ಮಿಷನ್(ಗ್ರಾ) ಯೋಜನೆಗಳ ಘಟಕಾಂಶಗಳು ಯಶಸ್ವಿಯಾಗಿ ಅನುಷ್ಠಾನಗೊಂಡಿದೆ. ಪ್ರತಿಯೊಬ್ಬ ನಾಗರೀಕರು ಸ್ವಚ್ಛ ಭಾರತದಿಂದ ಸಂಪೂರ್ಣ ಸ್ವಚ್ಛತೆ ಸಾಧಿಸಲು ತಮ್ಮದೇ ಆದ ಕೊಡುಗೆ ನೀಡುತ್ತಿದ್ದಾರೆ.

ಸ್ವಚ್ಛತಾ ಸೇನಾನಿಗಳು ತ್ಯಾಜ್ಯ ಸಂಗ್ರಹಣೆ, ವಿಂಗಡಣೆ ಹಾಗೂ ಸಮರ್ಪಕ ನಿರ್ವಹಣೆಯ ಜೊತೆಗೆ ಸ್ವಚ್ಛತೆಯ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನು ಎಲ್ಲದಕ್ಕಿಂತ ಸ್ವಚ್ಛ ಭಾರತ್ ಮಿಷನ್ ನ ವಿಶೇಷವೆಂದರೆ ಮಹಿಳಾ ಸಬಲೀಕರಣ. ಕರ್ನಾಟಕದ ವಿವಿಧ ಭಾಗಗಳಲ್ಲಿ ಸ್ವಚ್ಛ ಸಂಕೀರ್ಣ ನಿರ್ವಹಣೆ ಹಾಗೂ ಸ್ವಚ್ಛ ವಾಹಿನಿ ಚಾಲನೆ ಮಾಡುವ ಮೂಲಕ ಮಹಿಳೆಯರು ಎಲ್ಲರಿಗೂ ಸ್ಪೂರ್ತಿಯಾಗಿದ್ದಾರೆ. ಇದರಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಕಡೇಶ್ವಾಲ್ಯ ಗ್ರಾಮ ಪಂಚಾಯಿತಿಯ ಪ್ರಮೀಳಾ ಹಾಗೂ ಲಕ್ಷ್ಮೀ ಪ್ರಮುಖರು.

ಪ್ರಮೀಳಾ ಮತ್ತು ಲಕ್ಷ್ಮೀ ಇಬ್ಬರೂ ಕಡೇಶ್ವಾಲ್ಯ ಗ್ರಾ.ಪಂಯ ತ್ಯಾಜ್ಯ ಸಂಗ್ರಹಣಾ ವಾಹನದ ಚಾಲಕಿಯರು. ಕಡೇಶ್ವಾಲ್ಯ ಗ್ರಾಮದ ಬೊಳ್ಳಾರು ಮುಂಗೂರು ನಿವಾಸಿ ಪ್ರಮೀಳಾ ಹಾಗೂ ಪೆರ್ಲಾಪು ಮುಂಡಾಲ ನಿವಾಸಿ ಲಕ್ಷ್ಮೀ ಅವರಿಗೆ ಈ ಮೊದಲೆ ವಾಹನ ಚಾಲನೆ ಮಾಡುವುದು ತಿಳಿದಿತ್ತು. ಆ ನಂತರ ಗ್ರಾಮ ಪಂಚಾಯಿತಿ ಸ್ವಚ್ಛತೆಗೆ ಸಂಬಂಧಿಸಿದ ಮಾತ್ರ ಸಂಜೀವಿನಿ ಒಕ್ಕೂಟದ ಸಿಬ್ಬಂದಿಗಳು, ಗ್ರಾಮ ಪಂಚಾಯಿತಿ ಅಧಿಕಾರಿಗಳ ಪ್ರೋತ್ಸಾಹದಿಂದ ಸ್ವಚ್ಛತಾ ವಾಹಿನಿ ಚಾಲನೆ ಮಾಡಲು ಪ್ರಾರಂಭಿಸಿದರು.

ತ್ಯಾಜ್ಯ ಸಂಗ್ರಹ ಮಾಡಿ ಸ್ವಚ್ಛ ಸಂಕೀರ್ಣಕ್ಕೆ ನೀಡಿ ಮರಳುವುದಷ್ಟೇ ಇವರ ಕೆಲಸವಲ್ಲ. ಪ್ರತಿ ಮನೆಗೆ ತೆರಳುವ ಸಂದರ್ಭ ತ್ಯಾಜ್ಯ ವಿಲೇವಾರಿ ಏಕೆ ಅಗತ್ಯ, ಹಸಿ ಕಸ ಮತ್ತು ಒಣ ಕಸವನ್ನು ಬೇರ್ಪಡಿಸುವುದು ಹೇಗೆ ಎಂಬ ಮಾಹಿತಿಯನ್ನೂ ನೀಡುತ್ತಾರೆ. ಈ ಮೂಲಕ ನಿಜಾರ್ಥದಲ್ಲಿ ಇವರಿಬ್ಬರು ಸ್ವಚ್ಛತಾ ರಾಯಭಾರಿಗಳೆಂದು ಗುರುತಿಸಿಕೊಂಡಿದ್ದಾರೆ.

## ತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ಸಮರ್ಥವಾಗಿ ನಿಭಾಯಿಸುತ್ತಿರುವ ಮಹಿಳಾ ಸ್ವಚ್ಛತಾ ಸೇನಾನಿಗಳು

ದ.ಕ.ಜಿಲ್ಲೆಯಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಎನ್ಆರ್ಎಲ್ಎಂ(ಸಂಜೀವಿನಿ) ಮೂಲಕ ಸುಮಾರು 28 ಗ್ರಾ.ಪಂ.ಗಳಲ್ಲಿ ಮಹಿಳೆಯರೇ ಸ್ವಚ್ಛ ಸಂಕೀರ್ಣವನ್ನು ನಿರ್ವಹಣೆ ಮಾಡುತ್ತಿದ್ದಾರೆ. ಸುಮಾರು 59 ಮಂದಿ ಮಹಿಳೆಯರು ತರಬೇತಿ ಪಡೆದು ಚಾಲನಾ ವೃತ್ತಿ ನಿರ್ವಹಿಸುತ್ತಿದ್ದಾರೆ. ಕಡೇಶ್ವಾಲ್ಯ ಗ್ರಾ.ಪಂ.ನಲ್ಲಿ ಮಹಿಳೆಯರೇ ಪೂರ್ಣ ಪ್ರಮಾಣದಲ್ಲಿ ವಾಹನದ ಚಾಲಕಿಯರಾಗಿ ದುಡಿಯುತ್ತಿರುವುದು ವಿಶೇಷ. ಈ ಮೂಲಕ ಮಹಿಳೆಯರು ಚಾಲನಾ ವೃತ್ತಿಯಲ್ಲಿ ತೊಡಗಿಕೊಂಡಿರುವುದು ರಾಜ್ಯಮಟ್ಟದಲ್ಲಿ ಗಮನಸೆಳೆಯುತ್ತಿದೆ.

1196 ಮನೆಗಳಿರುವ ಕಡೇಶ್ವಾಲ್ಯ ಗ್ರಾಮದಲ್ಲಿ ತ್ಯಾಜ್ಯ ವಿಲೇವಾರಿ ಮಾಡುವುದು ತಲೆನೋವಾಗಿತ್ತು. ಮನೆಮನೆಯಿಂದ ತ್ಯಾಜ್ಯ ಸಂಗ್ರಹಣೆ ಮಾಡಿ ಅದರ ನಿರ್ವಹಣೆಗೆ ನೂರಾರು ಪ್ರಯತ್ನ ಪಟ್ಟರು ಕೂಡ ನಿರೀಕ್ಷಿತ ಪ್ರಮಾಣದಲ್ಲಿ ಯಶಸ್ಸು ಸಿಕ್ಕಿರಲಿಲ್ಲ. ಈ ಹಂತದಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿ ಪ್ರತೀ ಗ್ರಾಮಪಂಚಾಯಿತಿ ಮಟ್ಟದಲ್ಲಿ ಘನ□ದ್ರವ ತ್ಯಾಜ್ಯ ವಿಲೇವಾರಿ ಘಟಕ ಗಳನ್ನು ನಿರ್ಮಾಣ ಮಾಡಿದ್ದು ಗ್ರಾಮಪಂಚಾಯಿತಿಗಳಿಗೆ ವರದಾನವಾಯಿತು. ಈಗ ಈ ಮಹಿಳೆಯರು ಸ್ವಚ್ಛ ಭಾರತ ನಿರ್ಮಾಣದ ಕನಸನ್ನು ನನಸು ಮಾಡುವತ್ತ ಯಶಸ್ವಿಯಾಗಿ ಹೆಜ್ಜೆಯಿಡುತ್ತಿದ್ದಾರೆ.

ಶ್ಯಾಮಲಾ ಶೆಟ್ಟಿಯವರ ಅಧ್ಯಕ್ಷತೆಯಲ್ಲಿ ಮುನ್ನಡೆಯುತ್ತಿರುವ ಮಾತೃ ಸಂಜೀವಿನಿ ಒಕ್ಕೂಟದಲ್ಲಿ 25 ಮಹಿಳಾ ಸ್ವಸಹಾಯ ಗುಂಪುಗಳಿದ್ದು ಹಲವಾರು ಮಹಿಳೆಯರು ಕಾರ್ಯನಿರ್ವಹಿಸುತ್ತಿದ್ದಾರೆ. ಇನ್ನು ಪಂಚಾಯಿತಿ ಅಧಿಕಾರಿಗಳು ಒಕ್ಕೂಟಕ್ಕೆ ಅಗತ್ಯ ಮಾರ್ಗದರ್ಶನ ನೀಡುತ್ತಾ ಪ್ರೇರಕ ಶಕ್ತಿಯಾಗಿ ನಿಂತಿದ್ದಾರೆ. ಜಿಲ್ಲಾ ಮಟ್ಟದ ಹಲವು ತಂಡಗಳು ಈ ಘಟಕದ ಕಾರ್ಯವೈಖರಿಯ ಬಗ್ಗೆ ಅಧ್ಯಯನ ನಡೆಸುತ್ತಿದೆ.

ಗ್ರಾಮಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಪ್ರೋತ್ಸಾಹ, ಸಹಕಾರ, ಮಾರ್ಗದರ್ಶನ, ಕಾರ್ಮಿಕರ ಬದ್ಧತೆ ಹಾಗೂ ಗ್ರಾಮಸ್ಥರ ಸಹಕಾರದಿಂದ ಕಡ್ವೆಶಾಲ್ಯದಲ್ಲಿರುವ ಸ್ವಚ್ಛ ಸಂಕೀರ್ಣ ಘಟಕ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ಜೊತೆಗೆ ಸ್ವಚ್ಛ, ಸ್ವಸ್ಥ ನಿರ್ಮಾಣಕ್ಕಾಗಿ ಶ್ರಮಿಸುತ್ತಿರುವ ಪ್ರತಿಯೊಬ್ಬ ಮಹಿಳೆಯರು ಇಡೀ ರಾಜ್ಯಕ್ಕೆ ಮಾದರಿಯಾಗಿ ನಿಂತಿದ್ದಾರೆ.